KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-121
ಬುಧವಾರ 12 ಮಾರ್ಚ್ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ತುಮಕೂರು ತಾಲ್ಲೂಕಿನ ದೊಡ್ಡಸಾರಂಗಿಯಲ್ಲಿ ಶ್ರೀ ಲಕ್ಷ್ಮೀ ದೇವರು ಹಾಗೂ ಅಗಲಕುಪ್ಪೆ ಕುಮಟ ರಾಮ ದೇವರ ರಥೋತ್ಸವ ನೂರಾರು ಭಕ್ತಾದಿಗಳ ಸಮ್ಮುಖದಲ್ಲಿ ವೈಭವಯುತವಾಗಿ ನಡೆಯಿತು.

## ಸ್ವಂತ ವಾಹನದ ಮೇಲೆ ಪೊಲೀಸರು 'ಪೊಲೀಸ್' ಎಂದು ಬರೆಸುವಂತಿಲ್ಲ

ಬೆಂಗಳೂರು: ಸ್ವಂತ ವಾಹನದ ಮೇಲೆ ಪೊಲೀಸ್ ಇಲಾಖೆಯ ಅಧಿಕಾರಿಗಳಾಗಲಿ ಅಥವಾ ಸಿಬ್ಬಂದಿ ಪೊಲೀಸ್ ಎಂದು ಬರೆಸುವಂತಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಸ್ಪಷ್ಟನೆ ನೀಡಿದ್ದಾರೆ.

ಶ್ರವಣ ಬೆಳಗೊಳದ ಶಾಸಕ ಬಾಲಕೃಷ್ಣ ಸಿಎನ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಲಿಖಿತ ಮೂಲಕ ಉತ್ತರಿಸಿರುವ ಪರಮೇಶ್ವರ್ ಅವರು, ಸ್ವಂತ ವಾಹನದ ಮೇಲೆ ಪೊಲೀಸ್ ಎಂದು ಬರೆಸಿದ್ದರೇ ಅದು ಕಾನೂನು ಉಲ್ಲಂಘಿಸಿದಂತೆ ಎಂದು ಉಲ್ಲೇಖಿಸಿದ್ದಾರೆ. ರಾಜ್ಯದ ಪೊಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ನೌಕರರು ತಮ್ಮ ಸ್ವಂತ ವಾಹನದ ಮೇಲೆ ಪೊಲೀಸ್ ಎಂದು ಬರೆಸಿಕೊಂಡು ಸಂಚಾರ ಮಾಡಲು ಕಾನೂನಿನಲ್ಲಿ ಅವಕಾಶವಿಲ್ಲ ಎಂದಿದ್ದಾರೆ.

ಅಲ್ಲದೇ ಪೊಲೀಸ್ ಎಂದು ಬರೆಯಿಸಿಕೊಂಡಿರುವುದು ಗೃಹ ಇಲಾಖೆಯ ಗಮನಕ್ಕೆ ಬಂದಿದೆ ಎಂದು ಸಚಿವರು ಉತ್ತರ ನೀಡಿದ್ದಾರೆ.

### ಡಾ.ಬಿ.ಸಿ.ಶೈಲಾನಾಗರಾಜ್ ಸಾಹಿತ್ಯ ಭವನದಲ್ಲಿ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆಯಲ್ಲಿ ಲೇಖಕಿ ಪ್ರೊ.ಟಿ.ಆರ್.ಲೀಲಾವತಿ

## ತುಮಕೂರಿನ ಮೊದಲ ಶಾಸಕಿ ಶ್ರೀಮತಿ ಭಾಗಿರಥಮ್ಮ ನಮಗೆಲ್ಲಾ ಆದರ್ಶವಾಗಲಿ

ತುಮಕೂರು: ಮಹಿಳೆ ಇಂದು ಎಲ್ಲ ರಂಗದಲ್ಲಿಯೂ ಮುಂದಿದ್ದಾಳೆ ಎಂಬ ಮಾತುಗಳನ್ನು ಆಗಾಗ್ಗೆ ಕೇಳುತ್ತೇವೆ. ಆದರೆ ಮಹಿಳೆಯು ಎಲ್ಲಾ ರಂಗದಲ್ಲಿಯೂ ಅಂದು,ಇಂದು, ಎಂದೆಂದು ಮುಂದಿ ದ್ದಾಳೆ, ಸ್ವಾತಂತ್ರ ಹೋರಾಟದಲ್ಲಿಯೂ ಹೆಣ್ಣು ಮಕ್ಕಳು ಗಂಡಿಗೆ ಸರಿಸಮನಾಗಿ ದುಡಿದಿರುವುದನ್ನು ಕಾಣಬಹುದು. ತುಮಕೂರಿನ ಮೊದಲ ಎಂ.ಎಲ್.ಎ ಶ್ರೀಮತಿ ಭಾಗಿರಥಮ್ಮ ಅವರ ಜೀವನವೇ ಇದಕ್ಕೆ ಉದಾಹರಣೆ ಎಂದು ಲೇಖಕಿ ಪ್ರೊ.ಟಿ.ಆರ್.ಲೀಲಾವತಿ ತಿಳಿಸಿದ್ದಾರೆ.

ನಗರದ ಮರಳೂರಿನ ಪ್ರಗತಿ ಬಡಾವಣೆಯಲ್ಲಿರುವ ಡಾ.ಬಿ.ಸಿ. ಶೈಲಾನಾಗರಾಜ್ ಸಾಹಿತ್ಯ ಭವನದಲ್ಲಿ ತುಮಕೂರು ಜಿಲ್ಲಾ ಮಹಿಳಾ ಸಂಘಟನೆ(ರಿ), ವತಿಯಿಂದ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆ–2025 ಮತ್ತು ಜಿಲ್ಲಾ ಮಹಿಳಾ ಪ್ರಶಸ್ತಿ ಪ್ರಧಾನ ಸಮಾರಂಭ ಉದ್ಘಾಟಿಸಿ



ಮಾತನಾಡಿದ ಅವರು, ತುಮಕೂರಿನ ಮೊದಲ ಶಾಸಕಿಯಾಗಿದ್ದ ಶ್ರೀಮತಿ ಭಾಗಿರಥಮ್ಮ ಅವರು ಮದುವೆಯಾದ ಮಾರನೇ ದಿನವೇ ಸ್ವಾತಂತ್ರ ಹೋರಾಟದಲ್ಲಿ ಭಾಗಿಯಾಗಿದ್ದ ಕಾರಣಕ್ಕೆ ಬಂಧನಕ್ಕೆ ಒಳಗಾಗುತ್ತಾರೆ, ಹಲವಾರು ದಿನಗಳ ಕಾಲ ಗಂಡ ಒಂದು ಜೈಲಿನಲ್ಲಿ, ಹೆಂಡತಿ ಒಂದು ಜೈಲಿನಲ್ಲಿ ಬಂಧಿಯಾಗಿದ್ದರು. ಮಹಿಳೆಯರು ಪ್ರಾತಿನಿಧ್ಯವನ್ನು ಪ್ರತಿಪಾದಿಸುವ ಇಂತಹ ಅನೇಕ ಉದಾಹರಣೆಗಳು ನಮಗೆ ಸ್ವಾತಂತ್ರ ಪೂರ್ವದಲ್ಲಿ, ಸ್ವಾತಂತ್ರ ನಂತರದಲ್ಲಿಯೂ ಸಿಗುತ್ತವೆ ಎಂದರು.

ಭಾರತೀಯ ಮಹಿಳೆಯರಿಗೆ ಇಡೀ ವಿಶ್ವದಲ್ಲಿಯೇ ಅತ್ಯಂತ ಉನ್ನತ ಸ್ಥಾನವಿದೆ. ಬಸವಣ್ಣನವರ ಅನುಭವ ಮಂಟಪದಿಂದ ಇಂದಿನವರೆಗೂ ಮಹಿಳೆಯರನ್ನು ಪೂಜ್ಯ ಭಾವನೆಯಿಂದಲೇ ನೋಡಲಾ ಗುತ್ತಿದೆ. ಇದನ್ನು ವಿದೇಶ ಮಹಿಳೆಯರು ಸಹ ಅಪ್ಪಿಕೊಂಡಿರುವ ನಾವು ಕಾಣಬ ಹುದು. ಅಧುನಿಕತೆ, ಪಾಶ್ಚಾತ್ಯೀಕರಣಕ್ಕೆ ಮಾರು ಹೋಗಿರುವ ಭಾರತೀಯ ಯುವಜನತೆ, ಆದರಲ್ಲಿ ಮಹಿಳೆಯರ ಅವತಾರಗಳನ್ನು ಪ್ರತಿವರ್ಷದ ಡಿಸೆಂಬರ್ 31,ಜನವರಿ 01ರಂದು ನೋಡಬೇಕು. ಕುಡಿದು ಎದ್ದು ಓಡಾಡಲು ಆಗದ ಸ್ಥಿತಿಯನ್ನು ಗಮನಿಸಿದರೆ, ಮಹಿಳಾ ಸಬಲೀಕರಣ, ಲಿಂಗಸಮಾನತೆ ಎಂಬುದು ಎತ್ತ ಸಾಗಿದೆ ಎಂದು ಆತ್ಮ ವಿಮರ್ಶೆ ಮಾಡಿಕೊಳ್ಳಬೇಕಾದ ಅನಿವಾರ್ಯ ಇದೆ ಎಂದು ಪ್ರೊ.ಟಿ.ಆರ್.ಲೀಲಾವತಿ ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಮಹಿಳಾ ಸಂಘಟನೆಯ ಸಂಸ್ಥಾ ಪಕ ಅಧ್ಯಕ್ಷೆ ಡಾ.ಬಿ.ಸಿ.ಶೈಲಾ ನಾಗರಾಜು ಮಾತನಾಡಿ, ಮಹಿಳಾ ದಿನಾಚರಣೆ ಎಂಬುದು ಸ್ತ್ರೀ ಕುಲದ ಆತ್ಮವಿಶ್ವಾಸದ ಪ್ರತೀಕ. ನ್ಯೂಯಾರ್ಕ್ ಬಟ್ಟೆ ಗಿರಣಿಯಲ್ಲಿ ಸಮಾನ ಕೆಲಸಕ್ಕೆ ಸಮಾನವೇತನ, ಇನ್ನಿತರ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಆರಂಭವಾದ ಮಹಿಳಾ ಹೋರಾಟ ಇಡೀ ವಿಶ್ವಕ್ಕೆ ಮಾದರಿ ಯಾಯಿತು. 1975ರಲ್ಲಿ ವಿಶ್ವಸಂಸ್ಥೆ ಮಹಿಳಾ ಸಮಾನತೆ, ಆಕೆಯ ಹಕ್ಕುಗಳ ರಕ್ಷಣೆಯ ದೃಷ್ಟಿಯಿಂದ ವಿಶ್ವ ಮಹಿಳಾ ದಿನವನ್ನು ಘೋಷಣೆ ಮಾಡಿತ್ತು. ಇದರಿಂದ ಮಹಿಳೆಯರನ್ನು ನೋಡುವ ದೃಷ್ಟಿಕೋನವೇ ಬದಲಾಯಿತು ಎಂದರು.

ವಿಶ್ವ ಮಹಿಳಾ ದಿನದ ಅಂಗವಾಗಿ ರಾಷ್ಟ್ರಪ್ರಶಸ್ತಿ ವಿಜೇತ ಶಿಕ್ಷಕಿ ಹಾಗೂ ಮಹಿಳಾ ಸಂಘಟಕರಾದ ಶ್ರೀಮತಿ ಮಂಜುಳಾದೇವಿ ಅವರಿಗೆ ಜಿಲ್ಲಾ ಮಹಿಳಾ ಪ್ರಶಸ್ತಿ ನೀಡಿ ಗೌರವಿಸಲಾಯಿತು. ವೇದಿಕೆಯಲ್ಲಿ ವರದಕ್ಷಿಣೆ ವಿರೋಧಿ ವೇದಿಕೆಯ ಮಾಜಿ ಅಧ್ಯಕ್ಷರಾದ ಶ್ರೀಮತಿ ಜೀವರತ್ನ, ಸಮಾಜ ಸೇವಕರಾದ ಶ್ರೀಮತಿ ಎಂ.ಪಿ.ಸುಶೀಲ, ಪೊಲೀಸ್ ಅಧಿಕಾರಿ ಯಾದ ಶ್ರೀಮತಿ ಪುಷ್ಪಾವತಿ .ಎಂ.ಬಿ, ಇಲ್ಲಾ ಮಹಿಳಾ ಸಂಘಟನೆಯ ಖಜಾಂಚಿ ಶ್ರೀಮತಿ ಪಿ.ಜಿ.ಶಂಕುತಲ, ಎಂ.ಪ್ರವೀಣಾ, ನಿರ್ಮಲ ಗೂಳರಿವೆ ಉಪಸ್ಥಿತರಿದ್ದರು.

## 'ಅಧ್ಯಯನಶೀಲರಾಗಬೇಕು' ಮಹಿಳೆಯರಿಗೆ ಡಾ. ಶಾಲಿನಿ ಕರೆ

ತುಮಕೂರು: ಸಮಾಜದಲ್ಲಿ ಸ್ತ್ರೀಯರು ವೃತ್ತಿ ಕೌಶಲ್ಯಗಳನ್ನು ಬೆಳಸಿಕೊಂಡು ಎಲ್ಲಾ ವಿಷಯಗಳ ಸಮಗ್ರ ಅಧ್ಯಯನ ಮಾಡಬೇಕೆಂದು ಶ್ರೀ ಸಿದ್ದಗಂಗಾ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲೆ ಡಾ|| ಶಾಲಿನಿ ಎಂ ಕರೆ ನೀಡಿದರು.



ನೆಹರು ಯುವ ಕೇಂದ್ರ, ತಿಪಟೂರಿನ ಡಾ. ಬಿ. ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಹಾಗೂ ಶ್ರೀ ಸಿದ್ದಗಂಗಾ ಔಷಧ ಮಹಾವಿದ್ಯಾಲಯದ ಸಹಯೋಗದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಸ್ತ್ರೀಯರು ಪೂರ್ಣ ಪ್ರಮಾಣದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿಯೂ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಯಾವುದೇ ಕ್ಷೇತ್ರದಲ್ಲಾಗಲೀ ದೂರದೃಷ್ಟಿಯಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಸರ್ವತೋಮುಖ ಬೆಳವಣಿಗೆ ಹೊಂದಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ನೆಹರು ಯುವ ಕೇಂದ್ರದ ಕಾರ್ಯಕ್ರಮ ಅಧಿಕಾರಿ ರಾಜಶೇಖರ್ ಕೆ ಮಾತನಾಡಿ ಪೌಷ್ಠಿಕ ಆಹಾರವನ್ನು ಸೇವಿಸಿ ಆರೋಗ್ಯದ ಕಡೆ ಹೆಚ್ಚು ಗಮನವನ್ನು ಹರಿಸಬೇಕು. ಮಹಿಳೆಯರು ಬೇರೆಯುವರಿಂದ ಏನನ್ನೂ ನಿರೀಕ್ಷಿಸದೇ ತಮ್ಮದೇ ಆದ ರೀತಿಯಲ್ಲಿ ಸ್ವಾವಲಂಬಿ ಜೀವನವನ್ನು ನಡೆಸಬೇಕು ಎಂದರು.

ಅಧ್ಯಕ್ಷೀಯ ನುಡಿಗಳನ್ನಾಡಿದ ಶ್ರೀ ಸಿದ್ದಗಂಗಾ ಔಷಧ ಮಹಾವಿದ್ಯಾಲಯದ ಪ್ರಾಂಶುಪಾಲ ಸುರೇಶ್ ವಿ ಕುಲಕರ್ಣಿ ಮಹಿಳೆಯರು ತಂತ್ರಜ್ಞಾನವನ್ನು ಬಳಸಿಕೊಂಡು ಸಾಧಕಿಯರ ಆದರ್ಶಗಳನ್ನು ಪಾಲಿಸಬೇಕು ಎಂದರು. ಯಶಸ್ಸಿಗೆ ತಾಳ್ಮೆ, ಪರಿಶ್ರಮ ಬಹಳ ಮುಖ್ಯ ಹಾಗೂ ಮಹಿಳೆಯರು ಮನಸ್ಸು ಮಾಡಿದರೆ ಇಡೀ ಜಗತ್ತನ್ನು ಆಳಬಲ್ಲರು. ಲಿಂಗ ಸಮಾನತೆಯನ್ನು ತರುವ ಉದ್ದೇಶದಿಂದ ಮಹಿಳಾ ದಿನಾಚರಣೆ ಅಸ್ತಿತ್ವಕ್ಕೆ ಬಂದಿದೆ ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ಸಾಧಕಿ ಹಿರಿಯ ಉಪಾನ್ಯಾಸಕಿ ಡಾ. ಸುಮನ ಅವರನ್ನು ಸನ್ಮಾನಿಸಲಾಯಿತು. ಡಾ. ಮೇಘನ ಎಂ.ಎನ್, ವಿಶೇಷ ಉಪನ್ಯಾಸ ನೀಡಿದರು. ಶ್ರೀ ಸಿದ್ದಗಂಗಾ ಔಷಧ ಮಹಾವಿದ್ಯಾಲಯದ ಅಧ್ಯಾಪಕರುಗಳು, ವಿದ್ಯಾರ್ಥಿಗಳು ಹಾಜರಿದ್ದರು.

## ಬೆಂಚಗೆರೆ ರೈಲ್ವೇ ಗೇಟ್ ಬಳಿ ಸೇತುವೆ ನಿರ್ಮಾಣ ಸ್ಥಳ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿ ಶುಭ ಕಲ್ಯಾಣ್

ತುಮಕೂರು: ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಮಂಗಳವಾರ ಜಿಲ್ಲೆಯ ಗುಬ್ಬಿ ಪಟ್ಟಣದ ಬೆಂಚಗೆರೆ ರೈಲ್ವೇ ಗೇಟ್ ಬಳಿ ನಿರ್ಮಾಣ ಮಾಡಲು ಉದ್ದೇಶಿಸಿರುವ ರೈಲ್ವೆ ಮೇಲ್ಸೇತುವೆ ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದರು.



ರೈಲು ಚಲಿಸುವಾಗ ರೈಲ್ವೆ ಗೇಟ್ ಮುಚ್ಚುವುದರಿಂದ ಸುಮಾರು 2 ಕಿ.ಮೀ.ನಷ್ಟು ವಾಹನ ದಟ್ಟಣೆ ಉಂಟಾಗಿ ವಾಹನ ಸಂಚಾರ ಸಮಸ್ಯೆ ಎದುರಾಗಿದೆ ಎಂದು ಸ್ಥಳೀಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ತ್ವರಿತವಾಗಿ ಸೇತುವೆ ನಿರ್ಮಾಣ ಪ್ರಾರಂಭವಾಗಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಜನರ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವ ಉದ್ದೇಶದಿಂದ ಸೇತುವೆ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಸೇತುವೆ ನಿರ್ಮಾಣಕ್ಕಾಗಿ ಒಟ್ಟು 1.6 ಎಕರೆ ಭೂಸ್ವಾಧೀನ ಅಗತ್ಯವಿದ್ದು, ಆದಷ್ಟು ಬೇಗ ಭೂಸ್ವಾಧೀನಪಡಿಸಿ ಕೊಂಡು ಭೂಮಾಲೀಕರಿಗೆ ಪರಿಹಾರ ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶೀಘ್ರ ಭೂಸ್ವಾಧೀನ ಪ್ರಕ್ರಿಯೆ ಮುಗಿಸಿ, ಕಾಮಗಾರಿಗೆ ಅನುಮೋದನೆ ಪಡೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸ್ಥಳೀಯರಿಗೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಿಶೇ? ಭೂಸ್ವಾಧೀನ ಅಧಿಕಾರಿ ರೇಣುಕಾ ಪ್ರಸಾದ್ ಜಂಬಗಿ, ಭೂಮಾಪನ ಮೇಲ್ವಿಚಾರಕ ಕೃ? ಕುಮಾರ್, ಗುಬ್ಬಿ ತಾಲೂಕಿನ ತಹಶೀಲ್ದಾರ್ ಆರತಿ ಬಿ., ರೈಲ್ವೆ ಕಾರ್ಯನಿರ್ವಾಹಕ ಎಂಜಿನಿಯರ್ ಜಗದೀಶ್ ಸಾಯಿ ಸೇರಿದಂತೆ ಮತ್ತಿತರ ಅಧಿಕಾರಿಗಳು ಇದ್ದರು.

## ಶ್ರೀ ರೇಣುಕಾಚಾರ್ಯ ಜಯಂತಿ ಇಂದು

ತುಮಕೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿ?ತ್ ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ್ 12ರಂದು ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮಕ್ಕೆ ವಿವಿಧ ಸಮುದಾಯ ಮುಖಂಡರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತುಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು ಮಿರ್ಜಿ ಮನವಿ ಮಾಡಿದ್ದಾರೆ.

### ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆಯಲ್ಲಿ ಅಧಿಕಾರಿಗಳಿಗೆ ಡೀಸಿ ಸೂಚನೆ

## ಕುಡಿವ ನೀರು, ಜಾನುವಾರು ಮೇವು ಸಮಸ್ಯೆಗಳ ದೂರು ನೀಡಲು ಸಹಾಯವಾಣಿ ಸ್ಥಾಪಿಸಿ

ತುಮಕೂರು: ಕುಡಿಯುವ ನೀರು ಹಾಗೂ ಜಾನುವಾರು ಮೇವಿನ ಸಮಸ್ಯೆಗಳಿಗೆ ಸಂಬಂಧಿಸಿದ ಸಾರ್ವಜನಿಕ ದೂರುಗಳನ್ನು ಸಲ್ಲಿಸಲು ಸಾರ್ವಜನಿಕರ ಅನುಕೂಲಕ್ಕಾಗಿ ತಾಲೂಕು ಮಟ್ಟದಲ್ಲಿ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಿಲ್ಲಾಧಿಕಾರಿ ಕಚೇರಿ ನ್ಯಾಯಾಲಯ ಸಭಾಂಗಣದಲ್ಲಿ ಕುಡಿಯುವ ನೀರು ಹಾಗೂ ಮೇವಿನ ಪರಿಸ್ಥಿತಿ ಕುರಿತಂತೆ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು, ಸಹಾಯವಾಣಿ ಕೇಂದ್ರವು ದಿನದ 24 ಗಂಟೆಗಳ ಕಾಲವೂ ಕಾರ್ಯನಿರ್ವಹಿಸಬೇಕು. ಕುಡಿಯುವ ನೀರು ಹಾಗೂ ಮೇವಿನ ಸಮಸ್ಯೆಯನ್ನು ತ್ವರಿತವಾಗಿ ವಿಶ್ಲೇಷಿಸಿ, ಅಗತ್ಯವಿದ್ದಾಗ ಶೀಘ್ರವಾಗಿ ಕ್ರಮ ಕೈಗೊಳ್ಳಬೇಕು. ಸಹಾಯವಾಣಿ ಕೇಂದ್ರದಲ್ಲಿ ದಾಖಲಾಗುವ ಸಾರ್ವಜನಿಕರ ಸಮಸ್ಯೆ ಹಾಗೂ ಪರಿಹಾರ ಕ್ರಮದ ವರದಿಯನ್ನು ಪ್ರತಿದಿನ ತಮಗೆ ಮಾಹಿತಿ ನೀಡಬೇಕೆಂದು ಸೂಚಿಸಿದರು.

ಕುಡಿಯುವ ನೀರಿನ ಸಮಸ್ಯೆ ತಲೆದೋರಿದಾಗ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು. ಜನ–ಜಾನುವಾರುಗಳಿಗೆ ನೀರಿನ ಪೂರೈಕೆ, ಶುದ್ಧೀಕರಣ ಮತ್ತು ಲಭ್ಯತೆ ಬಗ್ಗೆ ಮುಂದಿನ ಸಭೆಯಲ್ಲಿ ಮಾಹಿತಿ ನೀಡಬೇಕು ಸೂಚನೆ ನೀಡಿದರು.

ಕೊಳವೆ ಬಾವಿ ಕೊರೆದು 3/4 ತಿಂಗಳಾದರೂ ವಿದ್ಯುತ್ ಸರಬರಾಜು ಸಂಪರ್ಕವಿಲ್ಲದೆ ಹಲವಾರು ಕೊಳವೆ ಬಾವಿಗಳು ಬತ್ತಿ ಹೋಗಿವೆ. ಇಂತಹ ಪ್ರಕರಣಗಳು ಕಂಡು ಬಂದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಬೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿ.ಪಂ. ಸಿಇಓ ಜಿ. ಪ್ರಭು ಮಾತನಾಡಿ ಜಿಲ್ಲೆಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿಯಮಿತವಾಗಿ ಪರೀಕ್ಷಿಸಬೇಕು. ದುರಸ್ತಿಯಲ್ಲಿರುವ ನೀರಿನ ಘಟಕಗಳನ್ನು ತ್ವರಿತವಾಗಿ ಸರಿಪಡಿಸಬೇಕು ಎಂದು ನಿರ್ದೇಶಿಸಿದರು.

ನಂತರ ಮಾತನಾಡಿದ ಮಹಾನಗರ ಪಾಲಿಕೆ ಆಯುಕ್ತ ಬಿ.ವಿ. ಅಶ್ವಿಜ ನಗರ ವ್ಯಾಪ್ತಿಯಲ್ಲಿ ಪ್ರಸ್ತುತ ಯಾವುದೇ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ. ಸಹಾಯವಾಣಿ ಕೇಂದ್ರದಲ್ಲಿ ಈವರೆಗೂ 88 ದೂರುಗಳು ದಾಖಲಾಗಿದ್ದು, ಪರಿಹಾರ ಒದಗಿಸಲು ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಪಶು ವೈದ್ಯ ಸೇವಾ ಇಲಾಖೆ ಉಪನಿರ್ದೇಶಕ ಡಾ|| ಗಿರೀಶ್‌ಬಾಬು ರೆಡ್ಡಿ ಸಭೆಗೆ ಮಾಹಿತಿ ನೀಡುತ್ತಾ ಜಾನುವಾರುಗಳಿಗೆ ಸದ್ಯಕ್ಕೆ ಮೇವಿನ ಕೊರತೆ ಇರುವುದಿಲ್ಲ. ಮೇವು ಉತ್ಪಾದಿಸಲು ನೀರಾವರಿ ಸೌಲಭ್ಯ ಹೊಂದಿರುವ ರೈತರಿಗೆ ಮೇವಿನ ಬೀಜದ ಮಿನಿ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳು ಡಾ: ಎನ್ ತಿಪ್ಪೇಸ್ವಾಮಿ, ಉಪವಿಭಾಗಾಧಿಕರಿಗಳು, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಯೋಗಾನಂದ, ಬೆಸ್ಕಾಂ, ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ವಿಭಾಗ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು, ತಹಶೀಲ್ದಾರರು ಹಾಗೂ ಮತ್ತಿತರರು ಭಾಗವಹಿಸಿದ್ದರು.

## ಸ್ಥಳಕ್ಕೆ ತೆರಳಿ ಔಷಧಿ ವಿತರಣೆ, ವಿನೂತನ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಚಾಲನೆ

ಬೆಂಗಳೂರು: ಕಾರ್ಮಿಕರ ಆರೋಗ್ಯ ತಪಾಸಣೆಯನ್ನು ಸ್ಥಳಕ್ಕೆ ತೆರಳಿ ನಡೆಸುವ ವಿನೂತನ ಕಾರ್ಯಕ್ರಮಕ್ಕೆ ಸಿಎಂ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು.



ವಿಧಾನಸೌಧದ ಬಳಿ ಸಂಚಾರಿ ಆರೋಗ್ಯ ಘಟಕ ವಿನೂತನ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರಿದ ಬಳಿಕ ಮಾತನಾಡಿದ ಸಿಎಂ, ಕಾರ್ಮಿಕರ ಆರೋಗ್ಯ ರಕ್ಷಣೆ ಮಾಡುವ ವ್ಯವಸ್ಥೆ ಇಲ್ಲ.

ಹಾಗಾಗಿ ಸಂಚಾರಿ ಆರೋಗ್ಯ ಘಟಕ ವಿನೂತನ ಕಾರ್ಯಕ್ರಮವನ್ನು ಜಾರಿಗೆ ತಂದಿದ್ದೇವೆ. ಸ್ಥಳಕ್ಕೆ ತೆರಳಿ ಕಾರ್ಮಿಕರಿಗೆ ಔಷಧಿ ವಿತರಣೆ ಮಾಡು ಕಾರ್ಯ ಇದಾಗಿದ್ದು, ಸಂಚಾರಿ ಆರೋಗ್ಯ ಘಟಕದ ಪ್ರತಿ ವಾಹನದಲ್ಲಿ ವೈದ್ಯರು, ನರ್ಸ್ ಇರುತ್ತಾರೆ. ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿರುವ ವ್ಯವಸ್ಥೆ ಇರಲಿದೆ. ಬಸವಣ್ಣನವರ ಕಾಯಕ–ದಾಸೋಹ ಪರಿಕಲ್ಪನೆಯ ಆಧಾರದಲ್ಲಿ ನಾವು ಕಾರ್ಯಕ್ರಮ ರೂಪಿಸುತ್ತಿದ್ದೇವೆ ಎಂದರು.

ಸಮಾಜದಲ್ಲಿ ದುಡಿಯುವ ವರ್ಗ ಒಂದು ಕಡೆ ಇದ್ದರೆ, ದುಡಿಸಿಕೊಳ್ಳುವ ವರ್ಗ ಮತ್ತೊಂದು ಕಡೆ ಇರುತ್ತದೆ. ಯಾರು ಉತ್ಪಾದನಾ ಚಟುವಟಿಕೆಯಲ್ಲಿ ಭಾಗವಹಿಸುತ್ತಾರೋ ಅವರೇ ದೇಶ ನಿರ್ಮಾತೃಗಳು. ಇಡೀ ದೇಶ ಕಾರ್ಮಿಕರ ಶ್ರಮವನ್ನು ಅವಲಂಬಿಸಿದೆ. ಸಮಾಜದಲ್ಲಿ ಒಂದೇ ವರ್ಗದವರು ದುಡಿಯುತ್ತಿರಬಾರದು, ಎಲ್ಲಾ ವರ್ಗದವರೂ ದುಡಿಯಬೇಕು. ಆಗ ಮಾತ್ರ ಬುದ್ದ, ಬಸವ, ಅಂಬೇಡ್ಕರ್ ಆಶಯದ ಸಮ ಸಮಾಜ ನಿರ್ಮಾಣ ಸಾಧ್ಯ ಎಂದರು.

ಕಟ್ಟಡ ಮತ್ತು ಇತರೆ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎನ್ನುವ ಕಾರಣದಿಂದ ಸರ್ಕಾರ ಕಾರ್ಮಿಕರ ಮಕ್ಕಳಿಗಾಗಿ ಉಚಿತ ಊಟ ಮತ್ತು ವಸತಿ ಶಾಲೆಗಳನ್ನು ತೆರೆಯಲಿದೆ. ಇವೆಲ್ಲಾ ಸವಲತ್ತುಗಳನ್ನು ಕಾರ್ಮಿಕರು ಸದುಪಯೋಗ ಪಡಿಸಿಕೊಳ್ಳಬೇಕು. ಕಟ್ಟಡ ಕಾರ್ಮಿಕರಿಗಾಗಿಯೇ ಸಜ್ಜುಗೊಳಿಸಿರುವ 135 "ಸಂಚಾರಿ ಆರೋಗ್ಯ ಘಟಕ" ಆಂಬುಲೆನ್ಸ್ ವಾಹನಗಳ ಲೋಕಾರ್ಪಣೆ ಸಮಾರಂಭದಲ್ಲಿ ಸಿಎಂ ಅಭಿಪ್ರಾಯಪಟ್ಟರು.

## ಡಾ. ಬಾಲ ಗುರುಮೂರ್ತಿ ಅವರಿಗೆ 'ಸಾಹಿತ್ಯ ಶ್ರೀ' ಪ್ರಶಸ್ತಿ

ತುಮಕೂರು : ಜಿಲ್ಲೆಯ ಪದವಿ ಪೂರ್ವ ಕಾಲೇಜು ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಡಾ.ಬಾಲ ಗುರುಮೂರ್ತಿ ಅವರಿಗೆ ರಾಜ್ಯ ಕನ್ನಡ ಸಾಹಿತ್ಯ ಅಕಾಡಮಿ ವತಿಯಿಂದ ನೀಡುವ 'ಸಾಹಿತ್ಯಶ್ರೀ' ಪ್ರಶಸ್ತಿಗೆ ಭಾಜನರಾಗಿದ್ದು, ಅವರನ್ನು ಜಿಲ್ಲಾ ಪ್ರಾಂಶುಪಾಲರು ಹಾಗು ಜಿಲ್ಲಾ ಜಾಗೃತ ದಳದ ಸಿಬ್ಬಂದಿ ಅಭಿನಂದಿಸಿದರು.



ಇದೇ ಸಂದರ್ಭದಲ್ಲಿ ಜಿಲ್ಲಾ ಪ್ರಾಂಶುಪಾಲರ ಸಂಘದ ಅಧ್ಯಕ್ಷ ಪ್ರಭಾಕರ್ ರೆಡ್ಡಿ ಮಾತನಾಡಿ ಇತ್ತೀಚೆಗೆ ಪ್ರಕಟವಾದ ರಾಜ್ಯ 'ಸಾಹಿತ್ಯಶ್ರೀ' ಪ್ರಶಸ್ತಿಗೆ ಆಯ್ಕೆಯಾಗಿರುವ ಇಲ್ಲ ಜಿಲ್ಲೆಯ ಉಪನಿರ್ದೇಶಕರಾದ ಬಾಲ ಗುರುಮೂರ್ತಿ ಅವರು ಸಾಹಿತ್ಯ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿದ್ದು ಇಂತಹ ಕವಿಗಳನ್ನು ಹಾಗು ಸಹೃದಯರು, ಜಿಲ್ಲೆಯಲ್ಲಿ ಸಾಕಷ್ಟು ಬದಲಾವಣೆಗೆ ನಾಂದಿ ಹಾಡಿದ್ದು, ಜಿಲ್ಲೆಯಲ್ಲಿ ಪದವಿ ಪೂರ್ವ ಕಾಲೇಜು ಶಿಕ್ಷಣ ಇಲಾಖೆಯ ಸಾಕಷ್ಟು ಕಾರ್ಯಗಳು ಚಾಲನೆಗೊಂಡು ಯಶಸ್ವಿಯಾಗಿ ನಡೆಯಲು ಉಪನಿರ್ದೇಶಕರು ಹಲವಾರು ಕ್ರಮಗಳನ್ನು ಕೈಗೊಂಡಿರುವುದು ಒಳ್ಳೆಯ ಬೆಳವಣಿಗೆ ಎಂದು ತಿಳಿಸಿದರು.

ಪದವಿ ಪೂರ್ವ ಕಾಲೇಜುಗಳ ರಾಜ್ಯ ದೈಹಿಕ ಉಪನ್ಯಾಸಕರ ಸಂಘದ ಅಧ್ಯಕ್ಷ ಬಸವರಾಜು ಮಾತನಾಡಿ ಜಿಲ್ಲೆಯ ಪದವಿ ಪೂರ್ವ ಕಾಲೇಜುಗಳು ಉಪನಿರ್ದೇಶಕರ ಕಾರ್ಯೋನ್ಮುಖದಿಂದ ಉತ್ತಮ ಬದಲಾವಣೆಯ ನಿರೀಕ್ಷೆ ನಮ್ಮಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಉಪನ್ಯಾಸಕರ ಸಂಘದ ಅಧ್ಯಕ್ಷ ಮಹಾಲಿಂಗೇಶ್, ಪ್ರಾಂಶುಪಾಲರಾದ ಜಗದೀಶ್ ಪ್ರಸಾದ್, ಕೃಷ್ಣಮೂರ್ತಿ, ಸತೀಶ್ ಸಿ.ಜಿ. ಮಂಜು, ಮಹೇಶ್, ನರಸಿಂಹಮೂರ್ತಿ ಇತರರಿದ್ದರು.

# ಕುಪ್ಪೂರು ಪತ್ತಿನ ಸಹಕಾರ ಸಂಘಕ್ಕೆ ಆಯ್ಕೆ

ಚಿಕ್ಕನಾಯಕನಹಳ್ಳಿ: ತಾಲ್ಲೂಕಿನ ಕುಪ್ಪೂರು ಗ್ರಾಮದ ಪ್ರಾಥಮಿಕ ಪತ್ತಿನ ಸಹಕಾರ ಸಂಘಕ್ಕೆ ನಡೆದ ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಮಾಜಿ ಸಚಿವ ಜೆ.ಸಿ. ಮಾಧುಸ್ವಾಮಿ ಬಣದ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ವಿಜಯಸಾಧಿಸಿದ್ದಾರೆ.



ಒಟ್ಟು 12 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಹತ್ತು ಸ್ಥಾನಗಳಲ್ಲಿ ಜೆ.ಸಿ. ಮಾಧುಸ್ವಾಮಿ ಬಣ ಗೆದ್ದುಕೊಂಡರೆ 2 ಸ್ಥಾನಗಳು ಎನ್‌ಡಿಎ ಪಾಲಾಗಿದೆ. ಜೆ.ಸಿ. ಮಾಧುಸ್ವಾಮಿಬಣದಿಂದ ಸಾಲಗಾರರ ಕ್ಷೇತ್ರದಲ್ಲಿ ಉಮೇಶ್ ಎ.ಎಂ. ಮಹೇಶ್ ಕೆ.ಎಂ. ಎನ್ ಎನ್ ಶ್ರೀಧರ್, ಶಾಂತಕುಮಾರ್ ಎಚ್.ಬಿ. ಎಲ್ಲರೂ ಸಾಮಾನ್ಯಸ್ಥಾನದಿಂದ ವಿಜೇತರಾದರೆ, ಉಮೇಶ್ ಎಸ್. (ಪರಿಶಿಷ್ಟ ಪಂಗಡ), ನಾಗರಾಜು (ಹಿಂದುಳಿದವರ್ಗ ಎ), ಯುವರಾಜ್ ಬಿ.ಆರ್. (ಹಿಂದುಳಿದವರ್ಗ ಬಿ), ಅಂಬಿಕ ಹಾಗೂ ಶೈಲಜಾ ಮಹಿಳಾ ಮೀಸಲು ಸ್ಥಾನದಿಂದ ವಿಜೇತರಾಗಿದ್ದಾರೆ. ಸಾಲಗಾರರಲ್ಲದ ಕ್ಷೇತ್ರದಿಂದ ಎಂ.ಶಶಿಕುಮಾರ್ ಜಯಗಳಿಸಿದ್ದಾರೆ.

ಎನ್‌ಡಿಎ ಬಣದಿಂದ ರಾಕೇಶ್ ಎ.ಜಿ. ಹಾಗೂ ಪರಿಶಿಷ್ಟಜಾತಿ ಮೀಸಲು ಕ್ಷೇತ್ರದಿಂದ ಜಯಣ್ಣ ಡಿ.ಎಚ್. ಆಯ್ಕೆಯಾಗಿದ್ದಾರೆ.

# ಇ-ಖಾತೆ ಅಭಿಯಾನದ ಸದ್ಬಳಕೆ ಮಾಡಿಕೊಳ್ಳಿ: ಟಿ.ಬಿ.ಜಯಚಂದ್ರ

ಶಿರಾ: ನಗರಸಭೆಯ ವತಿಯಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಇ-ಖಾತೆ ಅಭಿಯಾನ ಆರಂಭಿಸಲಾಗಿದ್ದು ಈ ಕಾರ್ಯಕ್ರಮವನ್ನು ಸದ್ಬಳಕೆ ಮಾಡಿಕೊಳ್ಳುವಂತೆ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಮನವಿ ಮಾಡಿದರು.

ನಗರದ 10ನೆ ವಾರ್ಡ್‌ನ ಅಂಬಾ ಭವಾನಿ ದೇವಸ್ಥಾನದಲ್ಲಿ ಸ್ಥಾಯಿ ಸಮಿತಿ ಅಧ್ಯಕ್ಷ ಎಸ್.ಎಸ್. ಅಜಯ್‌ಕುಮಾರ್ ನೇತೃತ್ವದಲ್ಲಿ ನಡೆದ ಇ ಮತ್ತು ಬಿ ಖಾತಾ ಅಭಿಯಾನ ಕಾರ್ಯಕ್ರಮದಲ್ಲಿ ಅರ್ಹರಿಗೆ ಉಚಿತವಾಗಿ ನಗರಸಭೆಯಿಂದ ಕೈಗೊಳ್ಳಲಾಗಿದ್ದ ಇ-ಖಾತಾ ಆದೇಶ ಪತ್ರಗಳನ್ನು ವಿತರಣೆ ಮಾಡಿ ಅವರು ಮಾತನಾಡಿದರು.



ನಗರದ ಅಭಿವೃದ್ಧಿಗೆ ವಿವಿಧ ಯೋಜನೆಗಳಡಿ ಅನುದಾನ ಮಂಜೂರಾತಿಗಾಗಿ ಸರ್ಕಾರಕ್ಕೆ ಮನವಿ ಮಾಡಿಕೊಳ್ಳಲಾಗಿದ್ದು ಈಗಾಗಲೇ ಹಲವು ಯೋಜನೆಗಳಡಿ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ. ಇ-ಖಾತಾ ಮತ್ತು ಬಿ ಖಾತೆಗಳನ್ನು ಮಾಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶ ಸರ್ಕಾರದಿಂದ ಲಭ್ಯವಾಗಿದ್ದು, ಹೆಚ್ಚಿನ ಮಾಹಿತಿಗಳನ್ನು ನಗರಸಭೆಯ ಸಿಬ್ಬಂದಿಗಳಿಂದ ಪಡೆಯಬಹುದಾಗಿದೆ ಎಂದು ಜಯಚಂದ್ರ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಗರಸಭೆಯ ಅಧ್ಯಕ್ಷ ಜೀಶಾನ್ ಮೊಹಮೂದ್ ಮಾತನಾಡಿ, ನಗರದ ಅಭಿವೃದ್ಧಿಗೆ ಕಂದಾಯ ವಸೂಲಾತಿಯ ಅಗತ್ಯವಿದೆ. ಸಾರ್ವಜನಿಕರು ಮತ್ತು ವಾಣಿಜ್ಯ ಮಳಿಗೆಯ ಮಾಲೀಕರು ಬಾಕಿ ಕಂದಾಯವನ್ನು ಪಾವತಿಸುವಂತೆ ಮನವಿ ಮಾಡಿದರು.

ಸ್ಥಾಯಿ ಸಮಿತಿ ಅಧ್ಯಕ್ಷ ಎಸ್.ಎಸ್.ಅಜಯ್‌ಕುಮಾರ್ ಮಾತನಾಡಿ, 10ನೆ ವಾರ್ಡ್ ಸಾರ್ವಜನಿಕರ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸುತ್ತಿದ್ದು, ನಿರಾಶ್ರಿತರಿಗೆ ನಿವೇಶನ ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ವಾರ್ಡ್ ಸಾರ್ವಜನಿಕರು ಮೂಲಭೂತ ಸಮಸ್ಯೆಗಳಿದ್ದಲ್ಲಿ ಕೂಡಲೇ ತಮ್ಮ ಗಮನಕ್ಕೆ ತರುವಂತೆ ಹೇಳಿದರು.

ನಗರಸಭೆಯ ಆಯುಕ್ತ ರುದ್ರೇಶ್, ರಾಜ್ಯ ಲಾಡರ ಸಂಘದ ಅಧ್ಯಕ್ಷ ವೆಂಕಟೇಶ್, ಅಂಬಾಭವಾನಿ ದೇವಸ್ಥಾನ ಸಮಿತಿಯ ವಿಜಯಕುಮಾರ್, ನಗರ ಕಾಂಗ್ರೆಸ್ ಕಾರ್ಯದರ್ಶಿ ರೂಪೇಶ್ ಕೃಷ್ಣಯ್ಯ, ಮಾನವ ಬಂಧುತ್ವ ವೇದಿಕೆಯ ಜಿಲ್ಲಾ ಸಂಚಾಲಕ ಧರಣಿಕುಮಾರ್, ಕರವೇ ಬಾಬು, ಕುಂಬಾರಹಳ್ಳಿ ಗಂಗಾಧರ್ ಸೇರಿದಂತೆ ಅನೇಕ ಪ್ರಮುಖರು ಇದ್ದರು.

# ಸಮರ್ಪಕ ಕುಡಿಯುವ ನೀರು ಪೂರೈಕೆಗೆ ಆಗ್ರಹ: ತಿಪಟೂರಿನಲ್ಲಿ ಬೃಹತ್ ಪ್ರತಿಭಟನೆ

ತಿಪಟೂರು: ನಗರಕ್ಕೆ ಶಾಶ್ವತ ಕುಡಿಯುವ ನೀರು ಪೂರೈಸಲು ನಗರಸಭೆ ವಿಫಲವಾಗಿದೆ. ಕುಡಿಯುವ ನೀರಿಗೆ ಜನರು ಪರದಾಡ ಬೇಕಾದ ಪರಿಸ್ಥಿತಿ ಉಂಟು ಮಾಡಿರುವ ನಗರಸಭೆ ಹಾಗೂ ಸರ್ಕಾರದ ವಿರುದ್ಧ ಜೆಡಿಎಸ್ ಮುಖಂಡ ಕೆ.ಟಿ ಶಾಂತಕುಮಾರ್ ನೇತೃತ್ವದಲ್ಲಿ ಪ್ರತಿಭಟನೆ ಹಾಗೂ ಸಿಂಗ್ರೀ ನಂಜಪ್ಪ ವೃತ್ತದ ಬಳಿ ರಸ್ತೆಗಳಿದು ಪೌರಾಯುಕ್ತರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ನಂತರ ತಹಶೀಲ್ದಾರ್‌ಗೆ ಮನವಿ ಪತ್ರ ಸಲ್ಲಿಸಲಾಯಿತು.



ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಜೆಡಿಎಸ್ ಮುಖಂಡ ಕೆ.ಟಿ ಶಾಂತಕುಮಾರ್, ಶಾಸಕರ ಆಡಳಿತ ವೈಫಲ್ಯದ ಪರಿಣಾಮ ನಗರದ ಜನ ಕುಡಿಯುವ ನೀರಿಗೂ ಪರಿತಪಿಸಬೇಕಾಗಿದೆ. ಯುಜಿಡಿ ನೀರು ಈಚನೂರು ಕೆರೆ ಸೇರಿದ ಪರಿಣಾಮ ಕಲುಷಿತ ನೀರು ಸೇವಿಸಬೇಕಾಗಿದೆ ಎಂದರು.

ನಗರಸಭೆ ಆಡಳಿತ ಸಂಪೂರ್ಣವಾಗಿ ವಿಫಲವಾಗಿದೆ. ನಗರವಾಸಿಗಳ ಸಮಸ್ಯೆ ಆಲಿಸದೆ ಆಡಳಿತ ನಡೆಸುತ್ತಿದೆ. ಪ್ರತಿವರ್ಷ ಸಾವಿರಾರು ರೂಪಾಯಿ ತೆರಿಗೆ ಪಡೆಯುವ ನಗರಸಭೆ ಕುಡಿಯುವ ನೀರು ಹಾಗೂ ಮೂಲ ಸೌಕರ್ಯ ಒದಗಿಸಲು ವಿಫಲವಾಗಿದೆ. ಇನ್ನೂ ಬೇಸಿಗೆ ಬರುವ ಮುನ್ನವೇ ಮಾರ್ಚ್ ನಲ್ಲಿ ಇಷ್ಟೊಂದು ನೀರಿನ ಸಮಸ್ಯೆ ಉಂಟಾದರೆ ಮುಂದಿನ ಮೇ, ಜೂನ್ ತಿಂಗಳಿನಲ್ಲಿ ಜನ ಜಾನುವಾರು ಕುಡಿಯುವ ನೀರಿಲ್ಲದೆ ಜೀವಕಳೆದುಕೊಳ್ಳುವ ಸ್ಥಿತಿ ಬರಬಹುದು ಎಂದರು.

ಈ ವರ್ಷದ ಬಜೆಟ್‌ನಲ್ಲಿ ಒಂದು ನಯಾಪೈಸೆಯನ್ನು ತಾಲ್ಲೂಕಿಗೆ ಶಾಸಕರು ತರುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು.

ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಮತ್ತಿಘಟ್ಟ ಶಿವಸ್ವಾಮಿ ಮಾತನಾಡಿ, ನಗರದ ಎಲ್ಲ ವಾರ್ಡ್‌ಗಳಲ್ಲಿಯೂ ನೀರಿನ ಸಮಸ್ಯೆ ಹೆಚ್ಚಾಗಿದೆ. ಟ್ಯಾಂಕರ್ ಮೂಲಕ ಹಣ ನೀಡಿ ನೀರು ಪೂರೈಸಿಕೊಳ್ಳುವ ಸ್ಥಿತಿ ನಿರ್ಮಾಣವಾಗಿದೆ ಎಂದರು.

ಮಾಜಿ ನಗರಸಭಾ ಸದಸ್ಯ ಪ್ರಸನ್ನ ಕುಮಾರ್ ಮಾತನಾಡಿ ವೈ.ಕೆ ರಾಮಯ್ಯ ಶ್ರಮದ ಪರಿಣಾಮ ಹೇಮಾವತಿ ನೀರು ತುಮಕೂರು ಜಿಲ್ಲೆಗೆ ದೊರೆತಿದೆ. ನಮ್ಮ ಪಾಲಿನ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ತಿಪಟೂರು ನಗರಕ್ಕೆ ಕುಡಿಯುವ ನೀರು ಪೂರೈಸುವ ಈಚನೂರು ಕೆರೆಗೆ ಯುಜಿಡಿ ಕೊಳಚೆ ನೀರು ಕಲುಷಿತವಾಗಿದ್ದು, ಬಹುತೇಕ ನೀರು ಕುಡಿಯಲು ಯೋಗ್ಯವಾಗಿಲ್ಲ ಎಂದರು.

ಪ್ರತಿಭಟನೆಯಲ್ಲಿ ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಮತ್ತಿಘಟ್ಟ ಶಿವಸ್ವಾಮಿ, ಯುವಘಟಕದ ಅಧ್ಯಕ್ಷ ಸುದರ್ಶನ್, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಇಮ್ರಾನ್ ಕೆ.ಕೆ.ಮುಖಂಡರಾದ ನಟರಾಜು, ಕೆ.ಎಂ ತಾತಯ್ಯ, ನಾಗರಾಜು, ಗುರುಮೂರ್ತಿ ಹಾಜರಿದ್ದರು.



ಶಿರಾ ತಾಲ್ಲೂಕು ಪಟ್ಟನಾಯಕನಹಳ್ಳಿ ಶ್ರೀ ಮೈಲಾರಲಿಂಗೇಶ್ವರ ಸ್ವಾಮಿ ಟ್ರಸ್ಟ್ ವತಿಯಿಂದ ಕರ್ನಾಟಕ ಸರ್ಕಾರದ ಮಾಹಿತಿ ಆಯುಕ್ತರಾಗಿ ನೇಮಕಗೊಂಡ ರುದ್ರಣ್ಣ, ನಾರು ನಿಗಮ ಅಭಿವೃದ್ಧಿ ಮಂಡಳಿ ಮಾಜಿ ಅಧ್ಯಕ್ಷ ಕೆ.ಬಿ.ಕೆ. ಮಂಜುನಾಥ್ ರವರನ್ನು ಸನ್ಮಾನಿಸಲಾಯಿತು. ಪಿ.ಎ.ಗುರುಮೂರ್ತಿ, ಪಿ.ಎನ್.ಗುಂಡಯ್ಯ, ದೊಡ್ಡರಾಜು, ಓಂಕಾರಪ್ಪ, ಚಂದ್ರು, ಪೂಜಾರ್ ಮಹೇಶ್, ಪಿ.ಹೆಚ್.ಮಂಜುನಾಥ್, ನಾಗರಾಜ್, ತಿಪ್ಪೇಸ್ವಾಮಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಶ್ರೀಕ್ಷೇತ್ರ ಬೊಮ್ಮನಹಳ್ಳಿ ಶ್ರೀ ಆದಿಶಕ್ತಿ ಮಾರಮ್ಮ ದೇವಿಯ ಜಾತ್ರೆ

ತುಮಕೂರು : ತುಮಕೂರು ತಾಲ್ಲೂಕು ಊರ್ಡಿಗೆರೆ ಹೋಬಳಿ, ಕೆಸರಮಡು ಅಂಚೆಯ ಶ್ರೀಕ್ಷೇತ್ರ ಬೊಮ್ಮನಹಳ್ಳಿಯಲ್ಲಿನ ಶ್ರೀ ಆದಿಶಕ್ತಿ ಮಾರಮ್ಮ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಇಂದು ಮುಂಜಾನೆ ಬೊಮ್ಮನಹಳ್ಳಿ ಗ್ರಾಮಸ್ಥರಿಂದ ವಿಶೇಷ ಅಗ್ನಿಕುಂಡ ಸೇವೆಯನ್ನು ನಡೆಸಲಾಯಿತು.



ಈ ಸಂದರ್ಭದಲ್ಲಿ ಶ್ರೀ ಆದಿಶಕ್ತಿ ಮಾರಮ್ಮದೇವಿ ದೇವಸ್ಥಾನದ ಅಭಿವೃದ್ಧಿ ಟ್ರಸ್ಟ್‌ನ ಉಪಾಧ್ಯಕ್ಷರಾದ ಎಂ.ಎನ್. ಚಿಕ್ಕಬುಡ್ಡೇಗೌಡರವರು ದೇವಸ್ಥಾನದ ಇತಿಹಾಸ ಹಾಗೂ ಜಾತ್ರಾ ವಿಶೇಷದ ಬಗ್ಗೆ ವಿವರಿಸುತ್ತಾ, ತಾಯಿಯು ಹತ್ತಿರದ ಸುತ್ತಮುತ್ತಲಿನ ಹತ್ತು ಗ್ರಾಮಗಳಿಗೆ ದೇವರು ಹೋಗಿ ಬರುತ್ತದೆ, ಜಾತ್ರೆ ಪ್ರಾರಂಭಕ್ಕೂ ಮುಂಚಿತವಾಗಿ ಹಳ್ಳಿಗಳಿಗೆ ಸಂಚಾರ ಹೋಗುವ ತಾಯಿಯು ಅಗ್ನಿಕುಂಡ ಹಾಯುವ ದಿನಕ್ಕೆ ಮರಳಿ ಬೊಮ್ಮನಹಳ್ಳಿಗೆ ಬರುತ್ತದೆ, ತಾಯಿಯು ಬಂದಂತಹ ಸಂದರ್ಭದಲ್ಲಿ ಭಕ್ತಾದಿಗಳು ಕುಂಡವನ್ನು ಹಾಯುತ್ತಾರೆ, ಜೊತೆಗೆ ಇದು ಕಳೆದ ಹತ್ತಾರು ದಶಕಗಳಿಂದ ನಡೆದುಕೊಂಡು ಬಂದಂತಹ ಪದ್ಧತಿಯಾಗಿದೆ ಎಂದು ತಿಳಿಸಿದರು. ಜೊತೆಗೆ ಈ ಜಾತ್ರೆಗೆ ಪಕ್ಕದ ಜಿಲ್ಲೆಗಳಾದ ರಾಮನಗರ, ಕೋಲಾರ, ಬೆಂಗಳೂರು ಗ್ರಾಮಾಂತರ, ಕೋಲಾರ, ಮಂಡ್ಯ ಸೇರಿದಂತೆ ಹಲವಾರು ಭಾಗಗಳಿಂದ ಜಾತ್ರೆಗೆ ಆಗಮಿಸುತ್ತಾರೆಂದು ತಿಳಿಸಿದರು.

ಟ್ರಸ್ಟ್‌ನ ಅಧ್ಯಕ್ಷರಾದ ನಿವೃತ್ತ ಪಿ.ಎಸ್.ಐ. ಗಂಗಪ್ಪರವರು ಮಾತನಾಡಿ ಈ ದೇವಾಲಯಕ್ಕೆ ಬಹಳ ಪ್ರಾಮುಖ್ಯತೆಯನ್ನು ನಾವು ಏಕೆ ಕೊಡುತ್ತಿದ್ದೇವೆಂದರೆ ಬೊಮ್ಮನಹಳ್ಳಿಗೆ ಮೊದಲು ಗಾಳಿ ಬೊಮ್ಮನಹಳ್ಳಿ ಎಂಬ ಹೆಸರು ಇತ್ತು ಈ ಹಿಂದೆ ಇಲ್ಲಿ ಹುಟ್ಟಿದಂತಹ ಮಕ್ಕಳು ಹೆಚ್ಚಿನ ದಿನಗಳು ಬದುಕುಳಿಯುತ್ತಿರಲಿಲ್ಲ, ಆ ಸಿದ್ದೇಶ್ವರ ದೇವರು ಹಾಗೂ ಮಾರಮ್ಮ ತಾಯಿಯು ಸೃಷ್ಟಿಯಾಗಿ ಇಲ್ಲಿದಂತಹ ದುಷ್ಟರನ್ನು ಸಂಹರಿಸಿದರು ಎಂಬ ಐತಿಹ್ಯವಿದೆ ಇದನ್ನು ಅರಿತ ಗ್ರಾಮದ ಕೆಲ ಹಿರಿಯರು ಸೇರಿಕೊಂಡು ಈ ಜಾತ್ರೆಯನ್ನು ನಡೆಸಲು ಪ್ರಾರಂಭಿಸಿದರು, ಅಂದಿನಿಂದ ಮಕ್ಕಳು ಸಾವು ಕ್ರಮೇಣವಾಗಿ ನಿಂತಿತು, ಜೊತೆಗೆ ಇಲ್ಲಿ ಹುಟ್ಟಿ ಬೆಳೆದಂತಹವರು ದೇಶದ ನಾನಾ ಮೂಲೆಗಳಲ್ಲಿ ವಿಶೇಷ ಸ್ಥಾನಗಳನ್ನು ಅಲಂಕರಿಸಿರುವುದು ಶ್ಲಾಘನೀಯ ವಿಚಾರವೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಟ್ರಸ್ಟ್‌ನ ಗೌರವಾಧ್ಯಕ್ಷರಾ ವೆಂಕಟಸ್ವಾಮಿ, ಬಿ.ಜಿ.ಮಾರೇಗೌಡ, ಪುಟ್ಟಯ್ಯ, ಬಿ.ಕೆ.ನಾಗರಾಜ್, ದೇವರಾಜು, ಮಾರೇಗೌಡ, ರೋಹಿತ್, ನಾಗರಾಜು, ಕರಿಯಪ್ಪ, ನಾರಾಯಣ್, ತಿಮ್ಮೇಗೌಡ, ನರಸಿಂಹಯ್ಯ ಸೇರಿದಂತೆ ಇನ್ನಿತರರು ಗ್ರಾಮದ ಮುಖಂಡರು, ಅಪಾರ ಭಕ್ತಾದಿಗಳು ಉಪಸ್ಥಿತರಿದ್ದರು.

# ಅಭಿನಂದನಾ ಸಮಾರಂಭ

ತುಮಕೂರು: ನಗರದ ವಿಘ್ನೇಶ್ವರ ಕಂಫರ್ಟ್ಸ್‌ನ ಸಭಾಂಗಣದಲ್ಲಿ ಮಾರ್ಚ್ 12 ರಂದು ಬೆಳಿಗ್ಗೆ 10 ಗಂಟೆಗೆ ಕನ್ನಡ ಸೇನೆ ವತಿಯಿಂದ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಸೇನೆ ಜಿಲ್ಲಾಧ್ಯಕ್ಷ ಧನಿಯಾಕುಮಾರ್ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಕೊರಟಗೆರೆ ತಾಲ್ಲೂಕಿನ ಎಲೆರಾಂಪುರದ ಕುಂಚಿಟಿಗರ ಮಹಾ ಸಂಸ್ಥಾನ ಮಠಧ್ಯಾಕ್ಷರಾದ ಶ್ರೀ ಹನುಮಂತನಾಥ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸುವರು.

ವಿಘ್ನೇಶ್ವರ ಮುಂಜಾನೆ ಗೆಳೆಯರ ಬಳಗದ ಗೌರವಾಧ್ಯಕ್ಷರಾದ ಎಂ.ಕೆ. ವೆಂಕಟಸ್ವಾಮಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಕನ್ನಡ ಸೇನೆ ಜಿಲ್ಲಾಧ್ಯಕ್ಷರಾದ ಧನಿಯಾ ಕುಮಾರ್ ಅಧ್ಯಕ್ಷತೆ ವಹಿಸುವರು.

# ಕಾರೇಹಳ್ಳಿಯಲ್ಲಿ ವೈಭವದ ರಂಗನಾಥಸ್ವಾಮಿ ರಥೋತ್ಸವ


ಹುಳಿಯಾರು: ಹುಳಿಯಾರು ಹೋಬಳಿಯ ಕಾರೇಹಳ್ಳಿಯ ಪುರಾಣ ಪ್ರಸಿದ್ಧ ಶ್ರೀ ರಂಗನಾಥ ಸ್ವಾಮಿಯ ಮೂಲಸ್ಥಾನದಲ್ಲಿ ವೈಭವಯುತ ಬ್ರಹ್ಮ ರಥೋತ್ಸವವು ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ವೈಭವದಿಂದ ಮಂಗಳವಾರ ಜರುಗಿತು.



ಕಳೆದ ಮೂರು ದಿನದಿಂದ ಜಾತ್ರೆ ಅಂಗವಾಗಿ ಸ್ವಾಮಿಗೆ ಕಂಕಣ, ಅಂಕುರಾರ್ಪಣೆ, ಧ್ವಜಾರೋಹಣ, ಉಯ್ಯಾಲೋತ್ಸವ, ಗಜಾರೋಹಣ, ಗರುಡ ವಾಹನೋತ್ಸವ, ಸಂತರ್ಪಣೆ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ವಿಧಿವತ್ತಾಗಿ ನಡೆದಿದ್ದು, ಮಂಗಳವಾರ ಮುಂಜಾನೆಯಿಂದಲೆ ಬ್ರಹ್ಮ ರಥೋತ್ಸವದ ವಿವಿಧ ಪೂಜಾ ಕೈಂಕರ್ಯ ನಡೆದವು. ರಥೋತ್ಸವದ ಅಂಗವಾಗಿ ರಥವನ್ನು ಬಗೆಬಗೆ ಹೂ ಹಾರ, ಬಾವುಟಗಳಿಂದ ಸಿಂಗರಿಸಿದ್ದಲ್ಲದೆ, ಪುಣ್ಯಾಹ, ಅನ್ನಶಾಂತಿ ಸೇರಿದಂತೆ ವಿವಿಧ ಪೂಜೆಗಳನ್ನು ನಡೆಸಿದ್ದರು.

ನಂತರ ರಂಗನಾಥಸ್ವಾಮಿಯ ಮೂಲಸ್ಥಾನದಿಂದ ಅಲಂಕೃತ ಉತ್ಸವ ಮೂರ್ತಿಯನ್ನು ನಗಾರಿ ಹೊತ್ತ ಬಸವನೊಂದಿಗೆ ಪೂರ್ಣಕುಂಭ ಹಾಗೂ ವಾದ್ಯ ಮೇಳದೊಂದಿಗೆ ರಥದ ಬಳಿ ಕರೆತಂದು ಸಿಂಗಾರಗೊಂಡ ಸರ್ವಾಲಂಕೃಥ ರಥದಲ್ಲಿ ಶ್ರೀ ಸ್ವಾಮಿಯವರನ್ನು ಪ್ರತಿಷ್ಠಾಪಿಸಿ ಸಹಸ್ರಾರು ಭಕ್ತರು ಉದ್ಘೋಷದೊಂದಿಗೆ ರಥವನ್ನೆಳೆಯಲಾಯಿತು.


ಸುಡುವ ಬಿಸಿಲನ್ನೂ ಲೆಕ್ಕಿಸದೆ ಬೆಳಿಗ್ಗೆಯಿಂದಲೇ ಕಿಕ್ಕಿರಿದು ನೆರೆದಿದ್ದ ಭಕ್ತರು ಜಯಘೋಷದೊಂದಿಗೆ ಸುಮಾರು ಐವತ್ತು ಅಡಿಗೂ ಎತ್ತರದ ರಥವನ್ನು ಎಳೆದರಲ್ಲದೆ ಮಂಡಕ್ಕಿ, ಬಾಳೆಹಣ್ಣುಗಳನ್ನು ರಥಕ್ಕೆ ಎಸೆಯುವ ಮೂಲಕ ತಮ್ಮ ಭಕ್ತಿ ಸಮರ್ಪಿಸಿದರು. ದೂರದೂರುಗಳಿಂದ ಆಗಮಿಸಿದ ಭಕ್ತರು ಸ್ವಾಮಿಗೆ ಹಣ್ಣುಕಾಯಿ ಮಾಡಿಸಿದರು, ಎಲ್ಲೆಲ್ಲೂ ಜಾತ್ರೆಯ ಸಡಗರ ತುಂಬಿ ತುಳುಕುತಿತ್ತು.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ನೀಡಿದ "ಪ್ರಜಾ ಪ್ರಗತಿ ದತ್ತಿ ಪ್ರಶಸ್ತಿ"ಪಡೆದ "ಸತ್ಯದರ್ಶನಿ ಪ್ರಾದೇಶಿಕ ಕನ್ನಡ ದಿನಪತ್ರಿಕೆ" ಉಪಸಂಪಾದಕ ಎಚ್.ಎನ್. ಮಲ್ಲೇಶ್, "ಕೃಷ್ಣರಾವ್ ದತ್ತಿ ಪ್ರಶಸ್ತಿ" ಪಡೆದ "ಕನ್ನಡ ಪ್ರಭ"ಜಿಲ್ಲಾ ಹಿರಿಯ ವರದಿಗಾರ ಉಗಮ ಶ್ರೀನಿವಾಸ್ ರವರನ್ನು ನಗರದಲ್ಲಿ ಸಹಕಾರ ಇಲಾಖೆಯ ನಿವೃತ್ತ ಅಧಿಕಾರಿ ಹಾಗೂ ಸಾಹಿತಿ, ಜ್ಞಾನ ಬುತ್ತಿ ಸತ್ಸಂಗದ ಅಧ್ಯಕ್ಷರಾದ ಟಿ. ಮುರಳಿ ಕೃಷ್ಣಪ್ಪ, ಮಹಾನಗರ ಪಾಲಿಕೆ ಮಾಜಿ ಸದಸ್ಯ ಹೆಚ್ ಮಲ್ಲಿಕಾರ್ಜುನಯ್ಯ ರವರು ಆತ್ಮೀಯವಾಗಿ ಸನ್ಮಾನಿಸಿದರು.

# ಯಕ್ಷದೀವಿಗೆಗೆ 'ಆರ್ಟ್ ಫಾರ್ ಹೋಪ್' ರಾಷ್ಟ್ರೀಯ ಗೌರವ

ತುಮಕೂರು: ಹ್ಯುಂಡೈ ಸಂಸ್ಥೆಯ ರಾಷ್ಟ್ರಮಟ್ಟದ ಪ್ರತಿಷ್ಠಿತ 'ಆರ್ಟ್ ಫಾರ್ ಹೋಪ್' ಪುರಸ್ಕಾರಕ್ಕೆ ನಗರದ ಯಕ್ಷದೀವಿಗೆ ಸಂಸ್ಥೆಯು ಪಾತ್ರವಾಗಿದೆ. ಈ ಸಂಬಂಧ ನವದೆಹಲಿಯಲ್ಲಿ ನಡೆದ ಕಲಾಪ್ರದರ್ಶನದಲ್ಲಿ ಸಂಸ್ಥೆಯ ಅಧ್ಯಕ್ಷೆ ಆರತಿ ಪಟ್ರಮೆ ಹಾಗೂ ಕೋಶಾಧಿಕಾರಿ ಡಾ. ಸಿಬಂತಿ ಪದ್ಮನಾಭ ಕೆ.ವಿ. ಗೌರವವನ್ನು ಸ್ವೀಕರಿಸಿದರು.




ಹ್ಯುಂಡೈ ಮೋಟಾರ್ ಇಂಡಿಯಾ ಮ್ಯಾನೇಜಿಂಗ್ ಡೈರೆಕ್ಟರ್ ಉನ್ಸೂ ಕಿಮ್ ಹಾಗೂ ಹಿರಿಯ ಛಾಯಾಗ್ರಾಹಕ ಆದಿತ್ಯ ಆರ್ಯ ಪ್ರಶಸ್ತಿ ಪ್ರದಾನ ಮಾಡಿದರು.

'ಆರ್ಟ್ ಫಾರ್ ಹೋಪ್' ಯೋಜನೆಯಡಿಯಲ್ಲಿ ರಾಷ್ಟ್ರದ ವಿವಿಧ ಭಾಗಗಳಿಂದ ಸಲ್ಲಿಕೆಯಾದ 520 ಪ್ರಸ್ತಾವನೆಗಳಲ್ಲಿ 10 ಸಂಸ್ಥೆಗಳನ್ನು ಹಾಗೂ 40 ಕಲಾವಿದರನ್ನು ಆಯ್ಕೆ ಮಾಡಲಾಗಿತ್ತು. ಹೀಗೆ ಆಯ್ಕೆಯಾದ ಸಂಸ್ಥೆಗಳಲ್ಲಿ ಯಕ್ಷದೀವಿಗೆಯೂ ಒಂದು.

ಈ ಅನುದಾನದಡಿಯಲ್ಲಿ ಪರಿಸರ ಸಂರಕ್ಷಣೆ ಹಾಗೂ ಸುಸ್ಥಿರ ಅಭಿವೃದ್ಧಿಗೆ ಸಂಬಂಧಿಸಿದ 'ಚಂದ್ರಮಂಡಲಚರಿತೆ' ಎಂಬ ಯಕ್ಷಗಾನವನ್ನು ಯಕ್ಷದೀವಿಗೆ ತಂಡವು ಸಿದ್ಧಪಡಿಸಿತ್ತು. ಹಿರಿಯ ಕಲಾವಿದ ಗಣರಾಜ ಕುಂಬ್ಳೆ ಪ್ರಸಂಗವನ್ನು ರಚಿಸಿದ್ದರು. ನವದೆಹಲಿಯ ಟ್ರಾವಂಕೋರ್ ಪ್ಯಾಲೇಸ್‌ನಲ್ಲಿ ನಡೆದ ಕಲಾಮೇಳದಲ್ಲಿ ಯಕ್ಷಗಾನದ ಸಾಕ್ಷ್ಯಚಿತ್ರ ಹಾಗೂ ಆಯ್ದ ಭಾಗವನ್ನು ಪ್ರದರ್ಶಿಸಲಾಯಿತು.

# ಉಚಿತ ಸಿಇಟಿ ನೀಟ್ ತರಗತಿಗಳು
## ಜಿ.ಪಂ. ಮಾಜಿ ಸದಸ್ಯೆ ಗಾಯಿತ್ರಿಬಾಯಿ


ಪಾವಗಡ: ಪಾವಗಡ ತಾಲ್ಲೂಕಿನಲ್ಲಿರುವ ಬಡ ದ್ವಿತಿಯ ಪಿ.ಯು.ಸಿ. ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ದಿಗಾಗಿ ಉಚಿತ ಸಿ.ಇ.ಟಿ. ತರಬೇತಿಗಳನ್ನು ಇದೇ ಮಾರ್ಚ ತಿಂಗಳ 19 ರಿಂದ ಪ್ರಾರಂಭಿಸಲಾಗುತ್ತಿದೆ ಎಂದು ತೇಜಸ್ ಛಾರಟೀಬಲ್ ಮತ್ತು ಎಜುಕೇಶನ್ ಟ್ರಸ್ಟ್ ಕಾರ್ಯದರ್ಶಿ ಹಾಗೂ ಮಾಜಿ ಜಿ.ಪಂ. ಸದಸ್ಯೆ ಗಾಯಿತ್ರಿಬಾಯಿಶಂಕರಮೂರ್ತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಅವರು ಮಂಗಳವಾರ ಸತ್ಯದರ್ಶಿನಿಯೊಂದಿಗೆ ಮಾತನಾಡಿ, ನಮ್ಮ ತಂದೆ ಮಾಜಿ ಶಾಸಕರಾದ ಸೋಮ್ಲಾನಾಯ್ಕ ಅವರ ಮಾರ್ಗದರ್ಶನದಲ್ಲಿ, ಈ ತರಬೇತಿಗಳನ್ನು ಹಮ್ಮಿಕೊಳ್ಳುತ್ತಿದ್ದು, ತಾಲ್ಲೂಕಿನಲ್ಲಿ ದ್ವಿತಿಯ ಪಿ.ಯು.ಸಿ. ವಿದ್ಯಾರ್ಥಿಗಳು ತಮ್ಮ ಮುಂದಿನ ವಿದ್ಯಾಭ್ಯಾಸಕ್ಕೆ ಸಿ.ಇ.ಟಿ. ಮತ್ತು ನೀಟ್ ಪರೀಕ್ಷೆಗಳನ್ನು ಬೇಕಾಗುತ್ತದೆ ಪ್ರಸ್ತುತ ಪರಿಸ್ಥಿಯಲ್ಲಿ ಈ ತರಬೇತಿ ಪಡೆಯಬೇಕಾದರೆ ಲಕ್ಷಾಂತರ ರೂಗಳನ್ನು ವ್ಯಯಿಸಬೇಕಾಗುತ್ತದೆ, ಬಡ ಪೋಷಕರಿಗೆ ಇದು ಹೊರೆಯಾಗುತ್ತದೆ ಅದ್ದರಿಂದ ಬಡ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕಳೆದ ಐದಾರು ವರ್ಷಗಳಿಂದ ಪಾವಗಡದ ಪಟ್ಟಣದ ಹರ್ಷಿತ ಕನ್ವೆಂಷನ್ ಹಾಲ್ ನಲ್ಲಿ ತರಬೇತಿಯನ್ನು ನುರಿತ ಉಪನ್ಯಾಸಕರಿಂದ ನೀಡುತ್ತಿದ್ದು, ಮಾರ್ಚ 19 ರಿಂದ ತರಗತಿಗಳು ಪ್ರಾರಂಭವಾಗುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ನೊಂದಾಯಿಸಿಕೊಂಡು ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು. ಹೆಚ್ಚಿನ ವಿವರಗಳಿಗೆ ಮೊ.ನಂ.9480348595 ಸಂಪರ್ಕಿಸಿ.

# ಶ್ರೀ ಮಾರುತಿ ಪಿರಮಿಡ್ ಧ್ಯಾನ ಕೇಂದ್ರದ ಪ್ರಾರಂಭೋತ್ಸವ

ತುಮಕೂರು : ನಗರದಲ್ಲಿ ಸುಭಾಷ್ ಪತ್ರೀಜಿ ಮತ್ತು ಸ್ವರ್ಣ ಮಾಲಾ ಪತ್ರೀಜಿ ಇವರ ಕೃಪಾ ಆಶೀರ್ವಾದದೊಂದಿಗೆ ಶ್ರೀ ಮಾರುತಿ ಪಿರಮಿಡ್ ಧ್ಯಾನ ಕೇಂದ್ರದ ಪ್ರಾರಂಭೋತ್ಸವವನ್ನ ಬೆಳಗುಂಬ ರಸ್ತೆಯ ಲಕ್ಷ್ಮಿ ನಗರದಲ್ಲಿ ಮಾರುತಿ ಪಿರಮಿಡ್ ಧ್ಯಾನ ಕೇಂದ್ರದ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಮಾರುತಿ ಪಿರಮಿಡ್ ಧ್ಯಾನ ಕೇಂದ್ರದ ಉದ್ಘಾಟನಾ ಕಾರ್ಯಕ್ರಮದ ಮೊದಲಿಗೆ ಹನುಮಂತಪುರದಿಂದ ಲಕ್ಷ್ಮಿ ನಗರದ ಧ್ಯಾನ ಕೇಂದ್ರದ ವರೆಗೆ ಜಾತ ನಡೆಸುವ ಮೂಲಕ ಸಸ್ಯಹಾರ ಜನಜಾಗೃತಿ ನಡೆಸಲಾಯಿತು, ಮಾಂಸಹಾರ ತ್ಯಜಿಸಿ ಸಸ್ಯಾಹಾರ ಸೇವಿಸಿ ಪ್ರಾಣಿ ಹಿಂಸೆ ಮಾಡಬೇಡಿ. ಅಹಿಂಸಾಧರ್ಮವನ್ನು ಪಾಲಿಸಿ ಎಂದು ಬಿತ್ತಿ ಪತ್ರ ಹಿಡಿದು ಘೋಷಣೆ ಕೂಗಿದರು. ಜಾತಾದ ಮುಖ್ಯ ಕೇಂದ್ರ ಬಿಂದುಗಳಾಗಿ ಮಲ್ಲಿಕಾರ್ಜುನ ಸ್ವಾಮಿ. ಬ್ರಹ್ಮಶ್ರೀ ಪ್ರೇಮ್ ನಾಥ್ ಜಿ . ವೇಣುಗೋಪಾಲ ರೆಡ್ಡಿ. ಶ್ರೀಮತಿ ಸುಜನ ರೆಡ್ಡಿ. ಮಾರುತಿ ಪಿರಮಿಡ್ ಧ್ಯಾನ ಕೇಂದ್ರದ ಮುಖ್ಯಸ್ಥ ಸತೀಶ್ ಮತ್ತು ಕುಟುಂಬ ಹಾಗೂ ನೂರಾರು ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದರು.

ಕಾರ್ಯಕ್ರಮಕ್ಕೆ ವಿಶೇಷ ಆಹ್ವಾನಿತರಾಗಿ ಶ್ರೀಮತಿ ಭಾರತಿ ಶ್ರೀನಿವಾಸ್. ಮಲ್ಲಿಕಾರ್ಜುನ ಹೊಳೆ. ಚಂದ್ರ ಮೋಹನ್ ಶ್ರೀಮತಿ ಶಾಲಿನಿಯವರು ಆಗಮಿಸಿದ್ದರು. ಪಿಎಸ್ಎಸ್ ಎಮ್ ತುಮಕೂರು ಧ್ಯಾನ ಬಳಗದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಸ್ವಾಮಿಗಳು ಮಾತನಾಡುತ್ತಾ ಹಿಂಸಾ ಮಾರ್ಗವನ್ನು ತ್ಯಜಿಸಿ ಅಹಿಂಸಾ ಧರ್ಮ ಅನುಸರಿಸಿ. ಸಸ್ಯಹಾರ ಸೇವಿಸಿ ಎಲ್ಲರಿಗೂ ಮಾದರಿಯಾದ ಜೀವನ ಸಾಗಿಸಬೇಕೆಂದರು. ಇದೇ ವೇಳೆ ಧ್ಯಾನ ಕೇಂದ್ರದ ಮುಖ್ಯಸ್ಥ ಸತೀಶ್ ರವರಿಗೆ ಆಶೀರ್ವದಿಸಿದರು. ಧ್ಯಾನ ಕೇಂದ್ರದ ಮುಖ್ಯಸ್ಥ ಸತೀಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಸ್ವಾಮಿಗಳು. ಬ್ರಹ್ಮಶ್ರೀ ಪ್ರೇಮನಾಥ್. ಸತೀಶ್. ಎಚ್ ಆರ್. ಶ್ರೀಮತಿ ವೈಶಾಲಿ ಸತೀಶ್ . ವೇಣು ಗೋಪಾಲ ರೆಡ್ಡಿ. ಸೃಜನ ರೆಡ್ಡಿ. ಮಲ್ಲಿಕಾರ್ಜುನ ಹೊಳೆ. ಚಂದ್ರಮೋಹನ್. ಶಾಲಿನಿ. ಹಾಗೂ ಪಿರಮಿಡ್ ಧ್ಯಾನ ಕೇಂದ್ರದ ಭಕ್ತಾದಿಗಳು ಭಾಗವಹಿಸಿದ್ದರು.

# ಹೆಣ್ಣು ಮಕ್ಕಳು ಸ್ವಾವಲಂಬಿಗಳಾಗಿ

ಮಧುಗಿರಿ: ಹೆಣ್ಣು ಮಕ್ಕಳು ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳುವ ಮೂಲಕ ಸ್ವಾವಲಂಬಿಗಳಾಗಿ, ಯಾರನ್ನೂ ಅವಲಂಬಿಸಿಕೊಳ್ಳದೆ ತಮ್ಮ ಕಾಲಮೇಲೆ ತಾವೆ ನಿಂತು ಕೊಳ್ಳುವುದನ್ನು ರೂಢಿಸಿಕೊಳ್ಳಿ ಎಂದು ಸಾಹಿತಿ ಬಿದಲೋಟಿ ರಂಗನಾಥ್ ತಿಳಿಸಿದರು

ಅವರು ಸಾರಥಿ ಚಾರಿಟೇಬಲ್ ಟ್ರಸ್ಟ್ (ರಿ) ಮೂಲಕ ಮಾತಾಂಗ ಮಹರ್ಷಿ ಸಮುದಾಯ ಸಂಘದ ಕಛೇರಿಯಲ್ಲಿ ಹಮ್ಮಿಕೊಂಡಿದ್ದ, ಉಚಿತ ಟೈಲರಿಂಗ್ ಹಾಗೂ ಬ್ಯೂಟಿಷಿಯನ್ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೆಲವು ಸಾರಿ ಎಷ್ಟೇ ಓದಿದ್ದರೂ ಕೆಲಸ ಸಿಗದೆ ಸಂಸಾರವನ್ನು ತೂಗುವುದು ಕಷ್ಟವಾಗುತ್ತದೆ.ಆಗ ಈ ತರದ ಟೈಲರಿಂಗ್ ಹಾಗೂ ಬ್ಯೂಟಿಷಿಯನ್ ತರಬೇತಿ ಪಡೆದುಕೊಂಡರೇ ಸ್ವಂತ ಉದ್ಯೋಗ ಕೈ ಯಲ್ಲಿರುತ್ತದೆ ಇದೇ ಮುಂದಿನ ಬದುಕಿಗೆ ದಾರಿ ದೀಪವಾಗುತ್ತದೆ ಎಂದರು.

ಸಾರಥಿ ಚಾರಿಟೇಬಲ್ ಟ್ರಸ್ಟ್ ನ ಕಾರ್ಯ ದರ್ಶಿ ನಂದಿನಿ ಸಾರಥಿ, ರಂಗಶಾಮಣ್ಣ ಮಾತನಾಡಿದರು.

ಕಾರ್ಯಕ್ರಮವನ್ನು ಮಮತಾ ಸಾರಥಿ ನಿರೂಪಿಸಿ ಸ್ವಾಗತಿಸಿದರು . ಕಾರ್ಯಕ್ರಮದಲ್ಲಿ ಜೀವಿಕ ಮಂಜುನಾಥ್. ಚಿಕ್ಕಮ್ಮ. ಡಿ.ಎಸ್.ಎಸ್ ಜಿಲ್ಲಾ ಸಂಚಾಲಕ ದೊಡ್ಡೇರಿ ಕಣಿಮಯ್ಯ, ಸಣ್ಣ ರಾಮಯ್ಯ, ತಿಪ್ಪೇಶ್, ಹ'ನ'ು ವ'ು ೦ ತ' ರಾಯಪ್ಪ.ಅರ್ಚನ.ಆಟೋದೇವರಾಜು, ಶನಿವಾರಮ್ಮ ಮುಂತಾದವರು ಇದ್ದರು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper